# ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಯಳಂದೂರು.

## CC 498/2026

ಪಿರ್ಯಾದಿ : ರಾಜ್ಯದ ಪರವಾಗಿ ಕುದೇರು ಪೊಲೀಸ್ ಠಾಣೆ

**ವಿರುದ್ಧ**

ಆರೋಪಿ : ಚಂದ್ರಯ್ಯ ಬಿನ್ ಲೇಟ್ ಶಾಂತರಾಜಯ್ಯ, 69 ವರ್ಷ,
ಕಿರಗಸೂರು ಗ್ರಾಮ, ಮಾದಪುರ ಅಂಚೆ,
ಚಾಮರಾಜನಗರ ತಾಲ್ಲೂಕು ಮತ್ತು ಜಿಲ್ಲೆ.

## :ಆಪಾದನಾ ನೀಡಿಕೆ:

ಶ್ರೀ ಸುಜಾತ ಹೆಚ್, ಎಲ್,ಎಲ್,ಎಂ., ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಯಳಂದೂರು ಆದ ನಾನು ನಿನ್ನನ್ನು ಈ ಕೆಳಕಂಡ ಆರೋಪಗಳಿಗೆ ಗುರಿಪಡಿಸುತ್ತೇನೆ.

ದಿನಾಂಕ: 17.04.2026 ರಂದು ಸಂಜೆಃ 5.00 ಗಂಟೆ ಸಮಯದಲ್ಲಿ ಕುದೇರು ಪೊಲೀಸ್ ಠಾಣಾ ಸರಹದ್ದಿಗೆ ಸೇರಿದ ಕಿರಗಸೂರು ಗ್ರಾಮದ ಅಂಬೇಡ್ಕರ್ ಸಮುದಾಯ ಭಾವನದ ಬಲಭಾಗ ಇರುವ ಸಾರ್ವಜನಿಕ ರಸ್ತೆಯಲ್ಲಿ, ಆರೋಪಿಯಾದ ನೀನು ಕಾನೂನು ಬಾಹಿರವಾಗಿ ಯಾವುದೇ ರಹದಾರಿಯಿಲ್ಲದೆ ಅಕ್ರಮವಾಗಿ 1.350 ಲೀಟರ್ ಪ್ರಮಾಣದ 90 ಎಂ.ಎಲ್ ಸಾಮರ್ಥ್ಯದ ಮದ್ಯ ತುಂಬಿದ ಓರಿಜಿನಲ್ ಚಾಯ್ಸ್ ಡಿಲಕ್ಸ್ ವಿಸ್ಕಿಯ 15 ಟೆಟ್ರಾ ಪ್ಯಾಕ್‌ಗಳನ್ನು ಹೆಚ್ಚಿನ ಹಣ ಸಂಪಾದನೆ ಮಾಡುವ ಉದ್ದೇಶದಿಂದ ಸಾರ್ವಜನಿಕರಿಗೆ ಸಾರ್ವಜನಿಕವಾಗಿ ಮಾರಾಟ ಮಾಡಿ ಸಾರ್ವಜನಿಕ ಸ್ಥಳದಲ್ಲೇ ಮದ್ಯವನ್ನು ಕುಡಿಯಲು ಅನುವು ಮಾಡಿಕೊಟ್ಟಿರುವ ಈ ಕ್ರಮವು ಕರ್ನಾಟಕ ಅಬಕಾರಿ ಕಾಯಿದೆ ಕಲಂ. 15(ಎ) ಮತ್ತು 32(3) ರ ಅಡಿಯಲ್ಲಿ ಅಪರಾಧ ಎಸಗಿರುವುದಾಗಿ ಆರೋಪಿಸಲಾಗಿದೆ.

ಪ್ರಶ್ನೆ: 1: ನಿಮಗೆ ಓದಿ ಹೇಳಿದ ಆಪಾದನೆ ತಿಳಿಯಿತೆ?

ಉತ್ತರ:

ಪ್ರಶ್ನೆ: 2: ನೀವು ಆಪಾದನೆಯನ್ನು ಒಪ್ಪಿಕೊಳ್ಳುವಿರೋ ಅಥವಾ ನಿಮ್ಮ ಪ್ರತಿವಾದ ಇದೆಯೆ?

ಉತ್ತರ:

ಮೇಲೆ ಪಡೆದ ಆರೋಪಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಸಮಕ್ಷಮ ನನಗೆ ಸ್ವತಃ ಹೇಳುವ ಹಾಗೆ ಪಡೆಯಲಾಗಿದ್ದು ಆರೋಪಿಯು ನುಡಿದ ಪೂರ್ಣ ಹಾಗೂ ಸತ್ಯವಾದ ಹೇಳಿಕೆಯನ್ನು ಈ ಬರಹವು ಒಳಗೊಂಡಿದೆ ಎಂದು ಈ ಮೂಲಕ ಧೃಡೀಕರಿಸುತ್ತೇನೆ.

ದಿನಾಂಕಃ 22.07.2026.

ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ,
ಯಳಂದೂರು.